# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿನ** ಪ್ರಶ್ನೆ ಸಂಖ್ಯೆ | : | 814 |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 12.12.2023 |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| ಅ) | ಬೆಂಗಳೂರು ಮತ್ತು ಬೆಳಗಾವಿಯಲ್ಲಿ ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಒಟ್ಟು ಎಷ್ಟು ಮಳಿಗೆ ಮತ್ತು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; | ಬೆಂಗಳೂರು ಮತ್ತು ಬೆಳಗಾವಿಯಲ್ಲಿ, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತದ ವತಿಯಿಂದ ಈ ಕೆಳಗಿನ ವಿವರಗಳಂತೆ ಮಳಿಗೆ ಮತ್ತು ನಿವೇಶನಗಳನ್ನು ಹಂಚಿಕೆ ಮಾಡಲಾಗಿರುತ್ತದೆ.<br><br>ಕ್ರ ಸಂ: 1<br>ಬೆಂಗಳೂರು — ಮಳಿಗೆ: 2352, ನಿವೇಶನ: 1347, ಒಟ್ಟು: 3699<br>ಬೆಳಗಾವಿ — ಮಳಿಗೆ: 421, ನಿವೇಶನ: 555, ಒಟ್ಟು: 976 |
| ಆ) | ಹಂಚಿಕೆಯಾಗದೆ ಉಳಿದಿರುವ ಮಳಿಗೆ ಮತ್ತು ನಿವೇಶನಗಳನ್ನು ಸಣ್ಣ ಕೈಗಾರಿಕಾ ಉದ್ಯಮಿಗಳಿಗೆ ವಿತರಿಸಲು ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತವು ಯಾವ ಯೋಜನೆ ಹಮ್ಮಿಕೊಂಡಿದೆ; | ಹಂಚಿಕೆಯಾಗದೆ ಉಳಿದಿರುವ ಮಳಿಗೆ ಮತ್ತು ನಿವೇಶನಗಳನ್ನು ಸಣ್ಣ ಕೈಗಾರಿಕಾ ಉದ್ಯಮಿಗಳಿಗೆ ವಿತರಿಸಲು, ಕರ್ನಾಟಕ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ನಿಯಮಿತವು ಕಾಲ ಕಾಲಕ್ಕೆ ಪತ್ರಿಕಾ ಪ್ರಕಟಣೆಯನ್ನು ಹೊರಡಿಸಿ, ಕೈಗಾರಿಕೋದ್ಯಮಿಗಳಿಂದ ಅರ್ಜಿಗಳನ್ನು ಆಹ್ವಾನಿಸಿ, ಸಂಬಂಧಪಟ್ಟ ಜಿಲ್ಲೆಯ ಜಂಟಿ ನಿರ್ದೇಶಕರು, ಜಿಲ್ಲಾ ಕೈಗಾರಿಕಾ ಕೇಂದ್ರರವರ ಅಧ್ಯಕ್ಷತೆಯಲ್ಲಿ ಇರುವ ಪರಿಶೀಲನಾ ಸಮಿತಿಯಲ್ಲಿ ಅರ್ಜಿಗಳನ್ನು ಪರಿಶೀಲಿಸಿ, ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗುವ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯಲ್ಲಿ ಹಂಚಿಕೆ ಮಾಡಲು ಕ್ರಮವಹಿಸಲಾಗುತ್ತಿದೆ. |
| ಇ) | ಬೆಂಗಳೂರು ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಕೈಗಾರಿಕೆಗಳ ದೈನಂದಿನ ಕಾರ್ಯಾಚರಣೆಗೆ ಆಡಚಣೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಮಸ್ಯೆಯನ್ನು ಪರಿಹರಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಬೆಂಗಳೂರು ಪೀಣ್ಯ ಕೈಗಾರಿಕಾ ಪ್ರದೇಶವನ್ನು 1971 ರಿಂದ 1974 ರವರೆಗೆ ಸುಮಾರು 1485 ಎಕರೆಯಲ್ಲಿ ಪ್ರದೇಶವನ್ನು ಅಭಿವೃದ್ಧಿಪಡಿಸಲಾಗಿದ್ದು, ದಿ: 07.12.1995ರ ಸರ್ಕಾರದ ಆದೇಶದಂತೆ ಪೀಣ್ಯ ಕೈಗಾರಿಕಾ ಪ್ರದೇಶವು ಬೆಂಗಳೂರು ಮಹಾನಗರ ಪಾಲಿಕೆಗೆ ಸೇರ್ಪಡೆಯಾಗಿರುತ್ತದೆ. ಅದರಂತೆ, ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದಲೇ ಪೀಣ್ಯ ಕೈಗಾರಿಕಾ ಪ್ರದೇಶವನ್ನು ನಿರ್ವಹಣೆ ಮಾಡಲಾಗುತ್ತಿದೆ.<br><br>ಪೀಣ್ಯ ಕೈಗಾರಿಕಾ ಪ್ರದೇಶದ ಮೂಲಭೂತ ಸೌಲಭ್ಯಗಳನ್ನು ಉನ್ನತೀಕರಿಸಲು 2021-22ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-214 ರಲ್ಲಿ "ರಾಜ್ಯದಲ್ಲಿ ಉತ್ಪಾದನಾ ವಲಯವನ್ನು ಆಕರ್ಷಿಸುವ ಉದ್ದೇಶದಿಂದ ಪೀಣ್ಯದಲ್ಲಿ ಕೈಗಾರಿಕಾ ಟೌನ್‌ಶಿಪ್ ಅನ್ನು ಸ್ಥಾಪಿಸಲಾಗುವುದು. ಇಲ್ಲಿ ಅಗತ್ಯ ಮೂಲಭೂತ ಸೌಲಭ್ಯವನ್ನು ರೂ.100.00 ಕೋಟಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು" ಎಂದು ಸರ್ಕಾರವು ಘೋಷಿಸಿರುತ್ತದೆ.<br><br>ಅದರಂತೆ, ಪೀಣ್ಯ 1ನೇ ಹಂತ ಮತ್ತು ಪೀಣ್ಯ 4ನೇ ಫೇಸ್ ಕಾಮಗಾರಿಗಳನ್ನು ರೂ100.00 ಕೋಟಿ ವೆಚ್ಚದಲ್ಲಿ ಚರಂಡಿ, ಕಲ್ವರ್ಟ್, ಸೇತುವೆಗಳ ಕಾಮಗಾರಿ, ಪಾದಚಾರಿ ಮಾರ್ಗ, ರಸ್ತೆಯ ಡಾಂಬರೀಕರಣ, ಬೀದಿ ದೀಪ ಮತ್ತು ಇತರೆ ಕಾಮಗಾರಿಗಳ ಮೂಲಭೂತ ಸೌಕರ್ಯಗಳ ಉನ್ನತೀಕರಣಗೊಳಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುತ್ತಿದೆ. |

Nested table in answer (ಅ):

| ಕ್ರ ಸಂ | ಬೆಂಗಳೂರು | | | ಬೆಳಗಾವಿ | | |
|---|---|---|---|---|---|---|
| | ಮಳಿಗೆ | ನಿವೇಶನ | ಒಟ್ಟು | ಮಳಿಗೆ | ನಿವೇಶನ | ಒಟ್ಟು |
| 1 | 2352 | 1347 | 3699 | 421 | 555 | 976 |

| | | |
|---|---|---|
| | | ಬೆಂಗಳೂರು ಜಲಮಂಡಳಿ ವತಿಯಿಂದ ನೀರು ಮತ್ತು ಒಳಚರಂಡಿ ಕೊಳವೆ ಮಾರ್ಗಗಳನ್ನು ಅಳವಡಿಸಿ ಪ್ರಸ್ತುತ ಪೀಣ್ಯ. ಕೈಗಾರಿಕಾ ಪ್ರದೇಶದಲ್ಲಿ ಸುಮಾರು 2371 ಕೈಗಾರಿಕಾ ಕಟ್ಟಡಗಳಿಗೆ ಜಲಮಂಡಳಿಯಿಂದ ನೀರು ಮತ್ತು ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸಿ ನಿರ್ವಹಿಸಲಾಗುತ್ತಿರುತ್ತದೆ. ಹೆಗ್ಗನಹಳ್ಳಿ ಜಲಸಂಗ್ರಹದಿಂದ ಸದರಿ ಕೈಗಾರಿಕಾ ಪ್ರದೇಶದ ಸಂಪರ್ಕಗಳಿಗೆ ದಿನ ಬಿಟ್ಟು ದಿನಗಳಲ್ಲಿ ನೀರನ್ನು ಸರಬರಾಜು ಮಾಡಲಾಗುತ್ತಿದೆ.<br><br>ಮುಂದುವರೆದಂತೆ, ಜಲಮಂಡಳಿಯ ವತಿಯಿಂದ ಕಾಲಕಾಲಕ್ಕೆ ಅಗತ್ಯತೆ ಅನುಸಾರ ನೀರು ಮತ್ತು ಒಳಚರಂಡಿ ಕೊಳವೆ ಮಾರ್ಗಗಳನ್ನು ಅಳವಡಿಸಿ ನಿರ್ವಹಣೆಯನ್ನು ಮಾಡಲಾಗುತ್ತಿರುತ್ತದೆ.<br><br>ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ಪೀಣ್ಯ ಕೈಗಾರಿಕಾ ಪ್ರದೇಶವು ರಾಷ್ಟ್ರೀಯ ಹೆದ್ದಾರಿ ನಾಲ್ಕರ ಉತ್ತರ, ದಕ್ಷಿಣದಲ್ಲಿ ಸ್ಥಾಪಿತವಾಗಿದ್ದು ಸದರಿ ಪ್ರದೇಶದಲ್ಲಿ ಹಲವಾರು ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆ. 2016-17ನೇ ಸಾಲಿನಲ್ಲಿ ಕೈಗಾರಿಕಾ ಪ್ರದೇಶದ ಅಭಿವೃದ್ಧಿಗಾಗಿ ರೂ.156.00 ಕೋಟಿಗಳ ಅನುದಾನವನ್ನು ನೀಡಲಾಗಿದ್ದು, ಈ ಪೈಕಿ ರೂ.75.00 ಕೋಟಿಗಳನ್ನು ಪೀಣ್ಯ ಕೈಗಾರಿಕಾ ಪ್ರದೇಶಗಳಿಗೆ ಅಭಿವೃದ್ಧಿಗಾಗಿ ಉಪಯೋಗಿಸಲಾಗಿರುತ್ತದೆ. ಮುಂದುವರೆದಂತೆ, ಪೀಣ್ಯ ದಾಸರಹಳ್ಳಿ ವಿಧಾನಸಭಾ ವ್ಯಾಪ್ತಿಯಲ್ಲಿ 2022-23ನೇ ಸಾಲಿನಲ್ಲಿ ಚೊಕ್ಕಸಂದ್ರ ಕೆರೆ ರಸ್ತೆ, ಪೀಣ್ಯ 3ನೆ ಮುಖ್ಯರಸ್ತೆ, ಹೆಗ್ಗನಹಳ್ಳಿ ಮುಖ್ಯ ರಸ್ತೆ, ಮರು ಡಾಂಬರೀಕರಣ ರೂ.5.00 ಕೋಟಿಗಳಲ್ಲಿ ಮಾಡಲಾಗಿರುತ್ತದೆ.<br><br>2022-23ನೇ ಸಾಲಿನ ಅಮೃತ ನಗರೋತ್ಥಾನ ಯೋಜನೆ ಅಡಿಯಲ್ಲಿ ದಾಸರಹಳ್ಳಿ ವಿಧಾನ ಸಭಾ ಕ್ಷೇತ್ರಕ್ಕೆ ರೂ.110.00 ಕೋಟಿಗಳನ್ನು ಹಾಗೂ ವಿಶೇಷ ಅನುದಾನವಾಗಿ ರೂ.25.00 ಕೋಟಿಗಳನ್ನು ನೀಡಲಾಗಿದ್ದು, ಈ ಪೈಕಿ ರೂ.35.00 ಕೋಟಿಗಳನ್ನು ಪೀಣ್ಯ ಕೈಗಾರಿಕಾ ಪ್ರದೇಶ ಮತ್ತು ಸುತ್ತಮುತ್ತಲಿನ ಸಂಪರ್ಕ ರಸ್ತೆಗಳನ್ನು ಅಭಿವೃದ್ಧಿಪಡಿಸಲು ಅನುದಾನ ಬಿಡುಗಡೆ ಮಾಡಲಾಗಿರುತ್ತದೆ.<br><br>ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ವಾರ್ಷಿಕ ನಿರ್ವಹಣಾ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲು ಬಿ.ಬಿ.ಎಂ.ಪಿ. ವತಿಯಿಂದ 2023-24ನೇ ಸಾಲಿನಲ್ಲಿ ರೂ.75.00 ಲಕ್ಷಗಳಿಗೆ ಅನುಮೋದನೆ ನೀಡಲಾಗಿರುತ್ತದೆ. ಈ ಎಲ್ಲಾ ಅಭಿವೃದ್ಧಿ ಕಾಮಗಾರಿಗಳಿಂದ ಪೀಣ್ಯ ಕೈಗಾರಿಕಾ ಪ್ರದೇಶದಲ್ಲಿ ಮೂಲಭೂತ ಸೌಲಭ್ಯಗಳು ಉತ್ತಮಗೊಂಡು ಕಾರ್ಯಚರಣೆಗೆ ಪೂರಕವಾದ ವಾತವರಣವನ್ನು ಒದಗಿಸಲು ಸರ್ಕಾರವು ಕ್ರಮಕೈಗೊಂಡಿದೆ. |

ಸಿಐ 235 ಸಿಎಸ್‌ಸಿ 2023

**(ಶರಣಬಸಪ್ಪ ದರ್ಶನಾಪೂರ)**

ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು.